ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ವಸತಿ ನಿರ್ಮಾಣ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

303 (308) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣ ವೆಚ್ಚವೆಷ್ಟು;

(ಆ) ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನಿರ್ಮಾಣದ ವೆಚ್ಚವು ವಿಭಿನ್ನವಾಗಿದೆಯೇ; ಹಾಗಿದ್ದಲ್ಲಿ, ಎರಡೂ ಪ್ರದೇಶಗಳಿಗೆ ಹಂಚಿಕೆಯನ್ನು ಸಮನಾಗಿಸಲು ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ;

(ಇ) ಉಭಯ ಪ್ರದೇಶಗಳ ನಿರ್ಮಾಣ ಸಾಮಗ್ರಿಗಳನ್ನು ಒಂದೇ ಸ್ಥಳದಿಂದ ತರುವುದರಿಂದ ಎರಡೂ ಪ್ರದೇಶಗಳ ಯೋಜಿತ ವೆಚ್ಚವನ್ನು ಅದೇ ನಿಯತಾಂಕಗಳಲ್ಲಿ ಅಳೆಯುವುದು ಸಾಧ್ಯವಾಗಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸುವುದೇ?